ನೀವು ಯಹೂದಿಗಳೊಡನೆ ಯುದ್ಧ ಮಾಡುವ ತನಕ ಮತ್ತು ಒಂದು ಬಂಡೆಯು ಅದರ ಹಿಂದೆ ಅಡಗಿರುವ ಯಹೂದಿಯನ್ನು ತೋರಿಸಿ, "ಓ ಮುಸಲ್ಮಾನನೇ! ಇಗೋ ನನ್ನ ಹಿಂದೆ ಒಬ್ಬ ಯಹೂದಿಯಿದ್ದಾನೆ. ಅವನನ್ನು ಕೊಲ್ಲು" ಎಂದು ಹೇಳುವ ತನಕ ಪ್ರಳಯವು ಸಂಭವಿಸುವುದಿಲ್ಲ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನೀವು ಯಹೂದಿಗಳೊಡನೆ ಯುದ್ಧ
ಮಾಡುವ ತನಕ ಮತ್ತು ಒಂದು ಬಂಡೆಯು ಅದರ ಹಿಂದೆ ಅಡಗಿರುವ ಯಹೂದಿಯನ್ನು ತೋರಿಸಿ, "ಓ ಮುಸಲ್ಮಾನನೇ! ಇಗೋ ನನ್ನ ಹಿಂದೆ ಒಬ್ಬ ಯಹೂದಿಯಿದ್ದಾನೆ. ಅವನನ್ನು ಕೊಲ್ಲು" ಎಂದು ಹೇಳುವ
ತನಕ ಪ್ರಳಯವು ಸಂಭವಿಸುವುದಿಲ್ಲ." [صحيح] [متفق عليه]

ಮುಸಲ್ಮಾನರು ಯಹೂದಿಗಳೊಡನೆ ಯುದ್ಧ ಮಾಡುವ ತನಕ ಪ್ರಳಯ ಸಂಭವಿಸುವುದಿಲ್ಲ ಎಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಸಿದ್ದಾರೆ. ಎಲ್ಲಿಯವರೆಗೆಂದರೆ ಒಬ್ಬ ಯಹೂದಿ ಯುದ್ಧದಿಂದ ಪಲಾಯನ ಮಾಡಿ ಒಂದು ಬಂಡೆಯ ಹಿಂದೆ ಅಡಗಿ ಕುಳಿತರೆ, ಅಲ್ಲಾಹು ಆ ಬಂಡೆಗೆ ಮಾತನಾಡುವ ಶಕ್ತಿಯನ್ನು ನೀಡಿ ಅದು ಮುಸಲ್ಮಾನನನ್ನು ಕೂಗಿ ಕರೆದು ತನ್ನ ಹಿಂದೆ ಒಬ್ಬ ಯಹೂದಿಯಿದ್ದಾನೆ ಎಂದು ಹೇಳುವವರೆಗೆ ಮತ್ತು ಆ ಮುಸಲ್ಮಾನನು ಅವನನ್ನು ಕೊಲ್ಲುವವರೆಗೆ ಪ್ರಳಯವು ಸಂಭವಿಸುವುದಿಲ್ಲ.

http://www.sunnah.global/hadeeth/kn/show/65023